ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಸಾರಿಗೆ ಇಲಾಖೆಯು ಸಾರ್ವಜನಿಕರಿಗೆ ಪರಿಣಾಮಕಾರಿ ಸೇವೆ ಸಲ್ಲಿಸಲು ಇರುವ ತೊಡಕುಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

430 (563) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯ ರಸ್ತೆ ಸಾರಿಗೆ ನಿಗಮವು ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಯನ್ನು ಒದಗಿಸುವ ಹಿನ್ನೆಲೆಯಲ್ಲಿ, ನಾಲ್ಕು ವಿಭಾಗಗಳನ್ನು ಮಾಡಿದ್ದರೂ, ಈವರೆಗೂ ನಿರೀಕ್ಷಿತ ಫಲಿತಾಂಶ ಬಂದಿಲ್ಲವೆಂದು ಹೇಳಲಾಗುತ್ತಿದ್ದು, ಈ ಕುರಿತು ಸರ್ಕಾರದ ನಿಲುವೇನು;

(ಆ) ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಒಟ್ಟು ಇರುವ ವಾಹನಗಳ ಸಂಖ್ಯೆ ಎಷ್ಟು; (ವಿಭಾಗವಾರು ವಿವರ ನೀಡುವುದು)

(ಇ) ಈ ವಾಹನಗಳನ್ನು ಖರೀದಿಸಿದ ಎಷ್ಟು ವರ್ಷಗಳ ಅವಧಿಯ ನಂತರ ಸ್ಕ್ರ್ಯಾಪ್ (Scrap) ಮಾಡಲಾಗುವುದು;

(ಈ) ಸದರಿ ವಾಹನಗಳ ಸಂಚಲನಕ್ಕೆ ಪ್ರತಿ ಕಿ.ಮೀ.ಗೆ ತಗಲುವ ವೆಚ್ಚವೆಷ್ಟು?